## ಕರ್ನಾಟಕ ಸರ್ಕಾರದ ನಡವಳಿ

ವಿಷಯ : ರಾಜ್ಯದ ಗ್ರಾಮ ಪಂಚಾಯತಿಗಳಲ್ಲಿ ಕುಡಿಯುವ ನೀರಿನ ಮತ್ತು ಬೀದಿ ದೀಪಗಳ ವಿದ್ಯುತ್ ಬಿಲ್ ಪಾವತಿಗಾಗಿ ಬ್ಯಾಂಕ್‌ಗಳಲ್ಲಿ ಪ್ರತ್ಯೇಕ ESCROW ಖಾತೆಯನ್ನು ತೆರೆಯುವ ಕುರಿತು.

**ಪ್ರಸ್ತಾವನೆ :**

1. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಬೀದಿ ದೀಪ ಹಾಗೂ ನೀರು ಪೂರೈಕೆಗೆ ಸಂಬಂಧಿಸಿದಂತೆ ವಿದ್ಯುತ್ ಬಿಲ್ಲುಗಳ ಬೇಬಾಕಿ ಪಾವತಿಗಾಗಿ ESCOM ಕಂಪನಿಗಳು ಸರ್ಕಾರವನ್ನು ಕೋರಿರುತ್ತವೆ. ಈ ಸಮಸ್ಯೆಯನ್ನು ಬಗೆಹರಿಸಲು ಹಾಗೂ ಗ್ರಾಮ ಪಂಚಾಯತಿಗಳ ಚಾಲ್ತಿ ತಿಂಗಳುಗಳ ವಿದ್ಯುತ್ ಬಿಲ್ ಮೊತ್ತವನ್ನು ತಪ್ಪದೇ ಸಂಬಂಧಿಸಿದ ಹೆಸ್ಕಾಂಗಳಿಗೆ ಪಾವತಿಸುವ ಸಲುವಾಗಿ ರಾಜ್ಯ ಸರ್ಕಾರದಿಂದ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆಯಾಗುತ್ತಿರುವ ಶಾಸನಬದ್ದ ಅನುದಾನದಲ್ಲಿ ಶೇ 60 ರಷ್ಟು ಅನುದಾನ ಹಾಗೂ ಕೇಂದ್ರ ಸರ್ಕಾರದಿಂದ ಬಿಡುಗಡೆಯಾಗುವ 13ನೇ ಹಣಕಾಸು ಆಯೋಗದ ಸಾಮಾನ್ಯ ಮೂಲ ಅನುದಾನ ಹಾಗೂ ಸಾಮಾನ್ಯ ನಿರ್ವಹಣ ಅನುದಾನದಿಂದ ಶೇ 25% ರಷ್ಟು ಮೊತ್ತವನ್ನು ಸ್ಟೇಟ್ ಬ್ಯಾಂಕ್ ಆಫ್ ಮೈಸೂರು ಮುಖಾಂತರ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಸ್ಟೇಟ್ ಬ್ಯಾಂಕ್ ಆಫ್ ಮೈಸೂರಿನ ಸ್ಥಳೀಯ ಶಾಖೆಗಳು ಅಥವಾ ಅದರ ಸಹ ಬ್ಯಾಂಕ್‌ಗಳ ಸ್ಥಳೀಯ ಶಾಖೆಗಳಲ್ಲಿ ESCROW ಖಾತೆಗಳನ್ನು ತೆರೆದು ಸದರಿ ಖಾತೆಗಳಿಗೆ ಈ ಹಣವನ್ನು ನೇರವಾಗಿ ಜಮೆ ಮಾಡಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 10 ಗ್ರಾಪಸ 2015, ಬೆಂಗಳೂರು, ದಿನಾಂಕ: 10-3-2015**

2. ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಗ್ರಾಮ ಪಚಾಯತಿಗಳ ಬೀದಿ ದೀಪಗಳು ಮತ್ತು ಕುಡಿಯುವ ನೀರಿನ ಸ್ಥಾವರಗಳ ಚಾಲ್ತಿ ತಿಂಗಳುಗಳ ವಿದ್ಯುತ್ ಬಿಲ್ ಪಾವತಿಸಲು ರಾಜ್ಯ ಸರ್ಕಾರದಿಂದ ಬಿಡುಗಡೆಯಾಗುವ ಶಾಸನಬದ್ಧ ಅನುದಾನದ ಶೇ. 60 ರಷ್ಟು ಹಾಗೂ ಕೇಂದ್ರ ಹಣಕಾಸು ಆಯೋಗದಿಂದ ಬಿಡುಗಡೆಯಾಗುವ 13ನೇ ಹಣಕಾಸು ಆಯೋಗದ ಸಾಮಾನ್ಯ ಮೂಲ ಅನುದಾನ ಹಾಗೂ ಸಾಮಾನ್ಯ ನಿರ್ವಹಣಾ ಅನುದಾನದ 25% ರಷ್ಟು ಮೊತ್ತವನ್ನು ಪ್ರತಿ ಗ್ರಾಮ ಪಂಚಾಯತಿಗಳಿಗೆ ಇದಕ್ಕಾಗಿ ಪ್ರತ್ಯೇಕವಾಗಿ ತೆರೆಯಲಾಗುವ ESCROW ಖಾತೆಗಳಿಗೆ ಬಿಡುಗಡೆ ಮಾಡಬೇಕಾಗಿರುತ್ತದೆ.

3. ಪ್ರಯುಕ್ತ, ಈ ಅನುದಾನವನ್ನು ಗ್ರಾಮ ಪಂಚಾಯತಿಗಳ ಹೆಸರಿನಲ್ಲಿ ಸ್ಥಳಿಯ ಎಸ್.ಬಿ.ಎಮ್. ಶಾಖೆಗಳಲ್ಲಿ/ಅದರ ಸಹ ಬ್ಯಾಂಕ್‌ಗಳಲ್ಲಿ ತೆರೆಯುವ ESCROW ಖಾತೆಗಳಿಗೆ ಜಮೆ ಮಾಡುವ ಸಲುವಾಗಿ ಎಲ್ಲಾ ಗ್ರಾಮ ಪಂಚಾಯತಿಗಳು ಕೂಡಲೇ ಸ್ಟೇಟ್ ಬ್ಯಾಂಕ್ ಆಫ್ ಮೈಸೂರು ಸಹಕಾರದೊಂದಿಗೆ ಪ್ರತ್ಯೇಕ ESCROW ಖಾತೆ ತೆರೆಯಲು ಆದೇಶಿಸಿದೆ.

4. ಈ ಖಾತೆಯಲ್ಲಿನ ಮೊತ್ತವನ್ನು ಎಸ್ಕಾಂ ಗಳ ಚಾಲ್ತಿ ತಿಂಗಳುಗಳ ಬಿಲ್ಲುಗಳನ್ನು ಪಾವತಿಸಲು ಮಾತ್ರ ಬಳಸತಕ್ಕದ್ದು ಹಾಗೂ ಇದಕ್ಕೆ ಅನುವಾಗುವಂತೆ ಬ್ಯಾಂಕ್ ಖಾತೆಯ ಪಾಸ್ ಬುಕ್ ಮತ್ತು ಎಲ್ಲಾ ಚೆಕ್ಕುಗಳನ್ನು ಪಾವತಿದಾರರ ಹೆಸರಿನ ಮುಂದೆ ಸ್ಥಳೀಯ ಎಸ್ಕಾಂ ಕಛೇರಿ ಮೊಹರನ್ನು ನಮೂದಿಸತಕ್ಕದ್ದು.

5. ಇದರಲ್ಲಿ ಯಾವುದೇ ತರಹದ ಲೋಪ ಬಾರದಂತೆ ಈ ಖಾತೆಯನ್ನು ನಿರ್ವಹಿಸುವ ಹೊಣೆಗಾರಿಕೆಯನ್ನು ಸಂಬಂಧಪಟ್ಟ ಗ್ರಾಮ ಪಂಚಾಯತಿಯ ಅಧ್ಯಕ್ಷರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳದ್ದು ಆಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಎಸ್.ಎಂ.ಜುಲ್‌ಫಿಖಾರ್ ಉಲ್ಲಾ)**
ನಿರ್ದೇಶಕರು (ಪಂಚಾಯತ್ ರಾಜ್–2) ಹಾಗೂ
ಸರ್ಕಾರದ ಪದನಿಮಿತ್ತ ಜಂಟಿಕಾರ್ಯದರ್ಶಿಗಳು
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಇಂಧನ ಇಲಾಖೆ.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಹೆಸ್ಕಾಂ, ಬೆಸ್ಕಾಂ, ಜೆಸ್ಕಾಂ, ಚೆಸ್ಕಾಂ, ಮೆಸ್ಕಾಂ.
6. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು.
7. ಸರ್ಕಾರದ ಕಾರ್ಯದರ್ಶಿಗಳು (ಆಯವ್ಯಯ ಮತ್ತು ಸಂಪನ್ಮೂಲ), ಆರ್ಥಿಕ ಇಲಾಖೆ.
8. ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕಾಧಿಕಾರಿಗಳು.
9. ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು/ಅಧ್ಯಕ್ಷರುಗಳು:- ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ
10. ಮುಖ್ಯ ವ್ಯವಸ್ಥಾಪಕರು, ಸ್ಟೇಟ್ ಬ್ಯಾಂಕ್ ಆಫ್ ಮೈಸೂರು, ಜಿ–ಸೇವಾ ಶಾಖೆ, ಲೇಡಿ ಕರ್ಜನ್ ರಸ್ತೆ, ಬೆಂಗಳೂರು.

**ಪ್ರತಿಯನ್ನು:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ರವರ ಆಪ್ತ ಕಾರ್ಯದರ್ಶಿ.
2. ಸರ್ಕಾರದ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ರವರ ಆಪ್ತ ಕಾರ್ಯದರ್ಶಿ.